677 (1130) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) – ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ದೇವಾಲಯಗಳ ಜೀರ್ಣೋದ್ಧಾರ ಕಾರ್ಯಗಳಿಗಾಗಿ ಕಳೆದ ಒಂದು ವರ್ಷದಿಂದ ಇಲ್ಲಿಯವರೆವಿಗೆ (ದಿನಾಂಕ 15 01 2007ರವರೆವಿಗೆ) ಆರಾಧನಾ ಯೋಜನೆಯ ಅನುದಾನವನ್ನು ಹೊರತುಪಡಿಸಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ,

ಆ) ಅನುದಾನವನ್ನು ಬಿಡುಗಡೆ ಮಾಡುವಾಗ ತಾರತಮ್ಯ ನೀತಿಯನ್ನು ಅನುಸರಿಸಿರುವುದು ನಿಜವೇ ,

ಇ) ಹಾಗಿದ್ದಲ್ಲಿ, ಮುಂಬರುವ ದಿನಗಳಲ್ಲಿ ಎಲ್ಲ ಮತಕ್ಷೇತ್ರಗಳಿಗೂ ಸಮಾನ ರೀತಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ?

ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು)

ಅ) 2005–06 ನೇ ಸಾಲಿನಲ್ಲಿ 27 ಜಿಲ್ಲೆಗಳ 1460 ಸಂಸ್ಥೆಗಳಿಗೆ ರೂ 6,33,14,500/– ಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ 2006–07ನೇ ಸಾಲಿನಲ್ಲಿ ಇಲ್ಲಿಯವರೆಗೆ 1085 ಸಂಸ್ಥೆಗಳಿಗೆ ರೂ 485 10 ಲಕ್ಷ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ

ರೂ 213 75 ಲಕ್ಷ ಅನುದಾನ ಮಂಜೂರು ಮಾಡಲು ಪರಿಶೀಲಿಸಲಾಗುತ್ತಿದೆ

ಆ) ಅನುದಾನವನ್ನು ಬಿಡುಗಡೆ ಮಾಡುವಾಗ ತಾರತಮ್ಯ ನೀತಿಯನ್ನು ಅನುಸರಿಸುತ್ತಿರುವುದಿಲ್ಲ ಆಯಾ ಜಿಲ್ಲೆಯಿಂದ / ಸಂಸ್ಥೆಗಳಿಂದ ಬಂದ ಬೇಡಿಕೆಗಳಿಗನುಗುಣವಾಗಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಲಭ್ಯತೆಯ ಮೇರೆಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ

ಇ) ಪ್ರಸಕ್ತ ಸಾಲಿನಲ್ಲಿ ಬೆಳಗಾಂ ಜಿಲ್ಲೆಯ 60 ಧಾರ್ಮಿಕ ಸಂಸ್ಥೆಗಳಿಗೆ ಒಟ್ಟು ರೂ 19 60 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ

ಅನುದಾನವನ್ನು ಧಾರ್ಮಿಕ ಸಂಸ್ಥೆಯ ಕೋರಿಕೆಗನುಗುಣವಾಗಿ ಹಾಗೂ ಅನುದಾನ ಲಭ್ಯತೆಗನುಸಾರವಾಗಿ ಮಂಜೂರು ಮಾಡಲಾಗುವುದು